## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೀನುಗಾರಿಕೆ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳಿಗೆ ಪ್ರತಿ ತಿಂಗಳು ಮುನ್ನೂರು ಲೀಟರ್ ಸೀಮೆಎಣ್ಣೆ ವಿತರಿಸುವ ಕುರಿತು.

ಓದಲಾಗಿದೆ: 1) ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಪಸಂಮೀ128 ಮೀಇಯೋ 2013(ಭಾಗ-1), ದಿನಾಂಕ: 10.9.2013ರ ಪ್ರಸ್ತಾವನೆ.

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1) ರಲ್ಲಿ ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಮೀನುಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಮೀನುಗಾರಿಕೆ ದೋಣಿಗಳಿಗೆ ಪ್ರತಿ ವರ್ಷ ಸೆಪ್ಟೆಂಬರ್ ತಿಂಗಳಿಂದ ಮೇ ತಿಂಗಳವರೆಗೆ 9 ತಿಂಗಳು ಪಡಿತರ ಸೀಮೆಎಣ್ಣೆಯನ್ನು ಪ್ರತಿ ಮಾಹೆ 200 ಲೀಟರ್‌ನಂತೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಹಂಚಿಕೆ ಮಾಡುತ್ತಿದ್ದು, 2013-14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮೀನುಗಾರಿಕೆ ಇಲಾಖೆಗೆ ಅವಶ್ಯವಿರುವ ಸೀಮೆಎಣ್ಣೆ ಪ್ರಮಾಣವನ್ನು 400 ಲೀಟರ್‌ಗೆ ಹೆಚ್ಚಿಸಲಾಗುವುದೆಂದು ಘೋಷಿಸಲಾಗಿದ್ದು, ಅದರಂತೆ, ಕ್ರಮ ಕೈಗೊಳ್ಳಲು ಪ್ರಸ್ತಾಪಿಸಲಾಗಿದೆ.

ಸರ್ಕಾರವು ಮೀನುಗಾರಿಕೆ ಇಲಾಖೆಯ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಕೇಂದ್ರ ಸರ್ಕಾರವು ಪ್ರಸ್ತುತ ಪಡಿತರ ಚೀಟಿಗಳಿಗೆ ಹಂಚಿಕೆ ಮಾಡುವ ಸೀಮೆಎಣ್ಣೆ ಪ್ರಮಾಣವನ್ನು ಗಮನದಲ್ಲಿಟ್ಟುಕೊಂಡು, ರಾಜ್ಯದಲ್ಲಿನ 4514 ಯಾಂತ್ರೀಕೃತ ಮೀನುಗಾರಿಕೆ ದೋಣಿಗಳಿಗೆ ಪ್ರತಿ ಮಾಹೆಗೆ 300 ಲೀಟರ್ ಸೀಮೆಎಣ್ಣೆಯನ್ನು ಹಂಚಿಕೆ ಮಾಡಲು ನಿರ್ಧರಿಸಿದೆ. ಅದರಂತೆ, ಈ ಕೆಳಕಂಡಂತೆ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಆನಾಸ 119 ಡಿಆರ್‌ಎ 2013,**

**ಬೆಂಗಳೂರು, ದಿನಾಂಕ. 23.10.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೀನುಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಒಳಪಡುವ ಪ್ರಸ್ತುತ ಆಹಾರ,ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ ಸಬ್ಸಿಡಿಯುಕ್ತ ಸೀಮೆಎಣ್ಣೆ ಪಡೆಯುತ್ತಿರುವ 4514(ಉತ್ತರ ಕನ್ನಡ ಜಿಲ್ಲೆಯ 990,

-2

24/10

25/10

ದಕ್ಷಿಣ ಕನ್ನಡ ಜಿಲ್ಲೆಯ 2610 ಹಾಗೂ ಉಡುಪಿ ಜಿಲ್ಲೆಯ 914) ಯಾಂತ್ರೀಕೃತ ಮೀನುಗಾರಿಕೆ ದೋಣಿಗಳಿಗೆ ಸೀಮೆಎಣ್ಣೆ ಪ್ರಮಾಣವನ್ನು ಪ್ರತಿ ಮಾಹೆಗೆ ಪ್ರತಿ ದೋಣಿಗೆ 300 ಲೀಟರ್‌ಗಳಿಗೆ ಹೆಚ್ಚಿಸಿ, ನವೆಂಬರ್ 2013 ರಿಂದ ಪ್ರತಿ ಲೀಟರ್‌ಗೆ ರೂ. 16.50ರ ದರದಲ್ಲಿ ವಿತರಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಆರ್. ವಿಜಯಾನಂದ ಶರ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಇಲಾಖೆ.

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಈ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಅದರ 200 ಪ್ರತಿಗಳನ್ನು ಒದಗಿಸಲು ಕೋರಿದೆ.

ಗೆ:

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು.
3. ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ.
6. ಮಾನ್ಯ ಯುವಜನ ಸೇವಾ ಮತ್ತು ಮೀನುಗಾರಿಕೆ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು,
7. ಆಯುಕ್ತರು, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
9. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
10. ಎಲ್ಲಾ ಉಪ ನಿರ್ದೇಶಕರು, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ.
11. ಪ್ರಧಾನ ವ್ಯವಸ್ಥಾಪಕರು, ಭಾರತ ಆಹಾರ ನಿಗಮ, ಬೆಂಗಳೂರು.
12. ಖಜಾನೆ ನಿರ್ದೇಶಕರು, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಮಿನಿ ಗೋಪುರ, ಡಾ: ಅಂಬೇಡ್ಕರ್ ರಸ್ತೆ, ಬೆಂಗಳೂರು.

-3

13. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಕರ್ನಾಟಕ, ಬೆಂಗಳೂರು.
14. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ನಂ.49, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ( ವೆಚ್ಚ-5), ವಿಧಾನ ಸೌಧ, ಬೆಂಗಳೂರು.
16. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ,
17. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
18. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ,
19. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ವ್ಯವಹಾರಗಳ ಪ್ರಕರಣ ಸಂಖ್ಯೆ. ಸಿ. 692/2013, ದಿನಾಂಕ. 11.10.2013)
20. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.